# ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 19-03-2021 ಪ್ರಶ್ನೆ ಸಂಖ್ಯೆ : 1449 (1783)

0ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ(ಸ್ಥಳೀಯಸಂಸ್ಥೆಗಳಕ್ಷೇತ್ರ)

ಉತ್ತರ ನೀಡಬೇಕಾ.ದ ದಿನಾಂಕ : 19-03-2021

ಉತ್ತರಿಸುವ ಸಚಿವರು: ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ವಿಷಯ : ರಾಜ್ಯದಲ್ಲಿ ಬೇಸಿಗೆಗೂ ಮುನ್ನವೇ ಗ್ರಾಮೀಣ ಭಾಗದಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗಿರುವ ಬಗ್ಗೆ

(ಅ) ರಾಜ್ಯದಲ್ಲಿ ಬೇಸಿಗೆಗೂ ಮುನ್ನವೇ ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿಗೆ ಹಾಹಾಕಾರ ಆರಂಭವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ರಾಜ್ಯದಲ್ಲಿ ಜನರಿಗೆ ಕುಡಿಯುವ ನೀರು ಪೂರೈಸಲು ಸರ್ಕಾರ ತೆಗೆದುಕೊಂಡ ಮುನ್ನೆಚ್ಚರಿಕಾ ಕ್ರಮಗಳೇನು ; (ವಿವರ ಒದಗಿಸುವುದು)

(ಇ) ಬೆಳಗಾವಿ ಜಿಲ್ಲೆಯಲ್ಲಿ ಯಾವ ಯಾವ ಗ್ರಾಮೀಣ ಪ್ರದೇಶಗಳು ಕುಡಿಯುವ ನೀರಿನ ವ್ಯವಸ್ಥೆ ಇಲ್ಲದೆ ತೊಂದರೆ ಅನುಭವಿಸುತ್ತಿವೆ; ಅಲ್ಲಿ ಕುಡಿಯುವ ನೀರು ಸರಬರಾಜು ವ್ಯವಸ್ಥೆ ಮಾಡಲು ಏನೇನು ಕ್ರಮಗಳನ್ನು ಕೈಗೊಳ್ಳಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಈ) ಗ್ರಾಮೀಣ ಕುಡಿಯುವ ನೀರು ಸರಬರಾಜು ವ್ಯವಸ್ಥೆಯ ಕಾಮಗಾರಿಗಳು ತೀರಾ ವಿಳಂಬವಾಗುತ್ತಿರಲು ಕಾರಣಗಳೇನು; (ವಿವರ ಒದಗಿಸುವುದು)

(ಉ) ಸದರಿ ಕಾಮಗಾರಿಗಳನ್ನು ತೀವ್ರಗತಿಯಲ್ಲಿ ಪ್ರಾರಂಭಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಊ) ಬೆಳಗಾವಿ ಜಿಲ್ಲೆ ಮಾಂಜರಿ ಮತ್ತು ಯಡೂರು ಗ್ರಾಮಗಳಿಗೆ ಕುಡಿಯುವ ನೀರು ಪೂರೈಸುವ ಯೋಜನೆಯ ಯಾವ ಹಂತದಲ್ಲಿದೆ; ಯಾವ ಕಾಲಮಿತಿಯೊಳಗೆ ಯೋಜನೆಯು ಪೂರ್ಣಗೊಂಡು ಗ್ರಾಮಗಳಿಗೆ ಕುಡಿಯುವ ನೀರು ಪೂರೈಸಲಾಗುವುದು ? (ವಿವರ ಒದಗಿಸುವುದು)